**ಸಿ.ಡಬ್ಲೂ–1 / ಪಿ.ಡಬ್ಲೂ–1**

**ಪ್ರಧಾನ ದಿವಾನಿ ನ್ಯಾಯಾಧೀಶರ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ನಂಜನಗೂಡು, ಮೈಸೂರು ಜಿಲ್ಲೆ .**

**ಸಿ.ಸಿ.ನಂ. 81/2018**

| | | |
|---|---|---|
| ಸಾಕ್ಷಿದಾರರ ಹೆಸರು | : | ರತ್ನಮ್ಮ |
| ಗಂಡನ ಹೆಸರು | : | ಚೆನ್ನಸ್ವಾಮಿ |
| ವಯಸ್ಸು | : | 40 ವರ್ಷ |
| ಉದ್ಯೋಗ | : | ವ್ಯವಸಾಯ |
| ವಾಸಸ್ಥಳ | : | ಮಲ್ಕುಂಡಿ, ನಂಜನಗೂಡು ತಾ. |

**ಸಾಕ್ಷಿಯನ್ನು ದಿನಾಂಕಃ 20.01.2026 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ ಮಾನ್ಯ ಸ. ಸ. ಅ. ರವರಿಂದಃ**

ನ್ಯಾಯಾಲಯದಲ್ಲಿರುವ ಆರೋಪಿ ನಮ್ಮ ಜಮೀನಿನ ಪಕ್ಕದವರು. ಚಾಸಾ–2 ರಿಂದ 4 ರವರು ನನಗೆ ಪರಿಚಯವಿರುತ್ತಾರೆ.

ಸುಮಾರು 10 ವರ್ಷಗಳ ಹಿಂದೆ ನಮ್ಮ ಜಮೀನಿನಲ್ಲಿ ಹಸುಗಳನ್ನು ಮೇಯಿಸುತ್ತಿದ್ದಾಗ ಮಧ್ಯಾಹ್ನ 3.30 ಗಂಟೆ ಸಮಯದಲ್ಲಿ ನಮ್ಮ ಜಮೀನಿನ ಪಕ್ಕದವರಾದ ಆರೋಪಿ ಸುರೇಶ್ ಯಾರಾದರೂ ಇದ್ದಾರೆಯೇ ಎಂಬುದನ್ನು ನೋಡಿ ಯಾರು ಇಲ್ಲವೆಂದು ತಿಳಿದುಕೊಂಡು ನಮ್ಮ ಜಮೀನಿಗೆ ಬಂದು ನನ್ನ ಬಲಗೈ ಹಿಡಿದು ಎಳೆದಾಡಿ ನನ್ನ ಸೀರೆ ಹಿಡಿದು ಎಳೆದಾಡಿ ನನ್ನನ್ನು ಕೆಳಕ್ಕೆ ಬೀಳಿಸಿ ನನ್ನ ತಲೆಯ ಎಡಭಾಗಕ್ಕೆ ಹೊಡೆದಿರುತ್ತಾರೆ. ಆರೋಪಿ ನನ್ನ ಸೀರೆ ಹಿಡಿದು ಎಳೆದಿದ್ದರಿಂದ ನನಗೆ ಅವಮಾನವಾಗಿರುತ್ತದೆ. ನಾನು ಕೂಗಿಕೊಂಡಾಗ ಚಾಸಾ–2 ಬಂದು ಗಲಾಟೆ ಬಿಡಿಸಿರುತ್ತಾರೆ. ಈ ವಿಚಾರವನ್ನು ಚಾಸಾ–2 ರವರು ದೂರವಾಣಿ ಮುಖಾಂತರ ಚಾಸಾ–4 ರವರಿಗೆ ತಿಳಿಸಿರುತ್ತಾರೆ. ನಂತರ ಚಾಸಾ–4 ಆಂಬುಲೆನ್ಸ್ ಮೂಲಕ ಹುಲ್ಲಹಳ್ಳಿ ಆಸ್ಪತ್ರೆಗೆ ಕರೆದುಕೊಂಡು ಹೋಗಿ ನಂತರ ನಂಜನಗೂಡು ಆಸ್ಪತ್ರೆಗೆ ಕರೆದುಕೊಂಡು

ಹೋಗಿರುತ್ತಾರೆ. ನಂತರ ನಾನು ಆಸ್ಪತ್ರೆಯಿಂದ ಬಂದು ಹುಲ್ಲಹಳ್ಳಿ ಪೊಲೀಸ್ ಠಾಣೆಗೆ ಹೋಗಿ ದೂರು ನೀಡಿರುತ್ತೇನೆ. ಸಾಕ್ಷಿಯು ದೂರನ್ನು ನೋಡಿ ಗುರುತಿಸಿದ್ದರಿಂದ, ಅದನ್ನು **ನಿಪಿ-1** ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು **ನಿಪಿ-1(ಎ)** ಎಂದು ಗುರುತಿಸಲಾಯಿತು. ನಾನು ದೂರು ಕೊಟ್ಟಾಗ ರಾತ್ರಿ 8.30 ಗಂಟೆಯಾಗಿತ್ತು.

ನಾನು ದೂರು ಕೊಟ್ಟ ನಂತರ ಪೊಲೀಸರು ನಮ್ಮ ಜಮೀನಿನ ಬಳಿ ಬಂದು ಮಹಜರ್ ಮಾಡಿ ಕುಡುಗೋಲು ಮತ್ತು ನನ್ನ ಸೀರೆಯನ್ನು ವಶಪಡಿಸಿಕೊಂಡಿರುತ್ತಾರೆ. ಸಾಕ್ಷಿಯು ಮಹಜರ್ ನಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದರಿಂದ, ಅದನ್ನು **ನಿಪಿ-2** ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು **ನಿಪಿ-2(ಎ)** ಎಂದು ಗುರುತಿಸಲಾಯಿತು. ಪೊಲೀಸರು ವಶಪಡಿಸಿಕೊಂಡ ಕುಡುಗೋಲು ಮತ್ತು ಸೀರೆಯನ್ನು ನೋಡಿದರೆ ಗುರುತಿಸುತ್ತೇನೆ. ಸಾಕ್ಷಿಯು ನ್ಯಾಯಾಲಯದಲ್ಲಿರುವ ಕುಡುಗೋಲು ಮತ್ತು ಸೀರೆಯನ್ನು ನೋಡಿ ಗುರುತಿಸಿದ್ದರಿಂದ, ಅವುಗಳನ್ನು ಕ್ರಮವಾಗಿ ಮುದ್ದೆ ಮಾಲು-**1** ಮತ್ತು **2** ಎಂದು ಗುರುತಿಸಲಾಯಿತು. ನಾನು ಆರೋಪಿಯನ್ನು ನೋಡಿದರೆ ಗುರುತಿಸುತ್ತೇನೆ. ಆರೋಪಿ ಈ ದಿನ ನ್ಯಾಯಾಲಯದಲ್ಲಿರುತ್ತಾರೆ.

ನಾನು ನ್ಯಾಯಾಲಯದಲ್ಲಿ ಹೇಳಿಕೆ ನೀಡಿರುತ್ತೇನೆ. ಸಾಕ್ಷಿಗೆ ಕಡತದಲ್ಲಿ ಮುಚ್ಚಿದ ಲಕೋಟೆಯಲ್ಲಿ ಸಾಕ್ಷಿಯ ಹೇಳಿಕೆ ದಾಖಲೆಯನ್ನು ತೆರೆದ ನ್ಯಾಯಾಲಯದಲ್ಲಿ ತೆಗೆದು ತೋರಿಸಿ ಗುರುತಿಸುವಂತೆ ಕೇಳಿದಾಗ ಸಾಕ್ಷಿಯು ಸದರಿ ಹೇಳಿಕೆಯನ್ನು ನೋಡಿ ಗುರುತಿಸಿರುತ್ತಾರೆ. ಸಾಕ್ಷಿಯು ದಂಡ ಪ್ರಕ್ರಿಯಾ ಸಂಹಿತೆ 164 ರಂತೆ ನೀಡಿರುವ ಹೇಳಿಕೆ ದಾಖಲೆಯನ್ನು ನೋಡಿ ಗುರುತಿಸಿದ್ದರಿಂದ, ಅದನ್ನು **ನಿಪಿ-3** ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು **ನಿಪಿ-3(ಎ)** ಎಂದು ಗುರುತಿಸಲಾಯಿತು.

**<u>ಪಾಟೀಸವಾಲುಃ</u>** ಆರೋಪಿ ಸಮಯ ಕೋರಿರುತ್ತಾರೆ, ಸಮಯ ನೀಡಲಾಯಿತು.

**(ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)**

**ಓ ಹೇ ಕೇ ಸಾ ಸ ಇ ಒ.,**

ಸಹಿ/-

**ಪ್ರಧಾನ ದಿವಾನಿ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.,**
**ನಂಜನಗೂಡು.**